## 6. ಸೋಂಕಿನ ವಿರುದ್ಧ ಭಾರತದಲ್ಲಿ ಜನಾಂದೋಲನ : ವಿಶ್ವಸಂಸ್ಥೆ ಉದ್ದೇಶಿಸಿ ಪ್ರಧಾನಿ ಮೋದಿ ಭಾಷಣ

ಕೊರೋನಾ ಸಾಂಕ್ರಾಮಿಕ ರೋಗದ ವಿರುದ್ಧದ ಹೋರಾಟದಲ್ಲಿ ಭಾರತ 150ಕ್ಕೂ ಹೆಚ್ಚು ದೇಶಗಳಿಗೆ ನೆರವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ವಿಶ್ವಸಂಸ್ಥೆಯ ಆರ್ಥಿಕ ಮತ್ತು ಸಾಮಾಜಿಕ ಮಂಡಳಿ ಸಭೆಯನ್ನುದ್ದೇಶಿಸಿ ವಿಡಿಯೋ ಕಾನ್ಫರೆನ್ಸ್ ಮೂಲಕ ಮಾತನಾಡಿದ ಮೋದಿ ಇಡೀ ವಿಶ್ವವನ್ನೇ ಭಾದಿಸುತ್ತಿರುವ ಕೊರೋನಾ ಎಲ್ಲ ದೇಶಗಳ ಪುನಶ್ಚೇತನದ ಸಾಮರ್ಥ್ಯವನ್ನೇ ಪರೀಕ್ಷೆಗೊಳಪಡಿಸಿದೆ. ಅದಕ್ಕಾಗಿ ಭಾರತದಲ್ಲಿ ಸರ್ಕಾರ ಮತ್ತು ನಾಗರಿಕ ಸಮಾಜವನ್ನು ಒಟ್ಟುಗೂಡಿಸುವ ಮೂಲಕ ಕೊರೋನಾ ವಿರುದ್ಧದ ಹೋರಾಟವನ್ನು ಜನರ ಹೋರಾಟವಾಗಿ ಪರಿವರ್ತಿಸಲಾಗಿದೆ. ದೇಶದಲ್ಲಿ ಭಾರೀ ಪ್ರಾಣದ ಸೋಂಕು ಪತ್ತೆಯಾಗುತ್ತಿದ್ದರೂ ಗುಣಮುಖರಾಗುವವರ ಪ್ರಮಾಣ ವಿಶ್ವದಲ್ಲೇ ಅತ್ಯಧಿಕವಾಗಿದೆ. ಇದಕ್ಕೆಲ್ಲಾ ಕಾರಣವಾಗಿರುವುದು ದೇಶದ ತಳಮಟ್ಟದ ಆರೋಗ್ಯ ವ್ಯವಸ್ಥೆ ಎಂದು ಹೇಳಿದರು.

ಲಾಕ್‌ಡೌನ್ ಅವಧಿಯಲ್ಲಿ ಸರ್ಕಾರ ಪ್ರತಿಯೊಂದು ಬಡ ಕುಟುಂಬಕ್ಕೂ ಸರ್ಕಾರದ ಯೋಜನೆಗಳು ತಲುಪುವಂತೆ ನೋಡಿಕೊಂಡಿದೆ ಮತ್ತು 300 ಶತಕೋಟಿ ಡಾಲರ್‌ಗೂ ಹೆಚ್ಚಿನ ಪ್ಯಾಕೇಜ್ ಘೋಷಿಸಿದೆ. ಇದು ಆರ್ಥಿಕತೆ ಪುನಶ್ಚೇತನಕ್ಕೆ ಸಾಧ್ಯವಾಗಲಿದೆ. ಸರ್ಕಾರ ತನ್ನ ಹೊಸ ಯೋಜನೆಗಳನ್ನು ಆತ್ಮ ನಿರ್ಭರ ಭಾರತದ ಮೂಲಕ ಜಾರಿಗೆ ಮುಂದಾಗಿದೆ. ಇದು ಸ್ವಾವಲಂಬಿ ಭಾರತ ನಿರ್ಮಾಣಕ್ಕೆ ಕಾರಣವಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

### ವಿಶ್ವಸಂಸ್ಥೆ ಪುನರ್ಜನ್ಮ, ಸುಧಾರಣೆಗೆ ಮೋದಿ ಕರೆ

ಅಪಾರ ಪ್ರಮಾಣದ ಸಾವು–ನೋವುಗಳನ್ನುಂಟು ಮಾಡಿದ 2ನೇ ಮಹಾಯುದ್ಧದ ಪರಿಣಾಮ ವಿಶ್ವದಲ್ಲಿ ಶಾಂತಿಯ ಪುನರ್ ಸ್ಥಾಪನೆಗಾಗಿ ವಿಶ್ವಸಂಸ್ಥೆ ಉದಯಿಸಿತು. ಇದೀಗ ವಿಶ್ವಸಂಸ್ಥೆಯ ಮರುಹುಟ್ಟು ಮತ್ತು ಸುಧಾರಣೆಗೆ ಕೊರೋನಾ ಸದಾವಕಾಶ ಕಲ್ಪಿಸಿಕೊಡಲಿದೆ. ಈ ಸದಾವಕಾಶವನ್ನು ನಾವು ಕಳೆದುಕೊಳ್ಳಬಾರದು, ಸುಧಾರಿತ ಬಹುತ್ವದಿಂದ ಮಾತ್ರವೇ ಮಾನವೀಯತೆಯ ಆಕಾಂಕ್ಷೆಗಳನ್ನು ಪೂರೈಸಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಕರೆ ಕೊಟ್ಟಿದ್ದಾರೆ.

193 ದೇಶಗಳನ್ನು ಸದಸ್ಯ ರಾಷ್ಟ್ರವಾಗಿಸಿಕೊಂಡಿರುವ ವಿಶ್ವಸಂಸ್ಥೆಯ ಸ್ಥಾಪನೆಯಾದಗಿಂದಲೂ ಈವರೆಗೆ ಹಲವು ಮಾರ್ಪಾಟುಗಳಿಗೆ ಒಳಪಟ್ಟಿದೆ, ಬಹುತ್ವದ ಮೂಲಕ ಸಮೃದ್ಧಿ ಸಾಧನೆ ಮತ್ತು ಸುಸ್ಥಿರ ಶಾಂತಿ ಸ್ಥಾಪನೆಯಲ್ಲಿ ಭಾರತ ನಂಬಿಕೆಯಿರಿಸಿದೆ. ಅಲ್ಲದೆ, ಪ್ರಸ್ತುತ ವಿಶ್ವವು ಬಹುತ್ವವನ್ನು ಪ್ರತಿಬಿಂಬಿಸಬೇಕು ಎಂಬುದು ಭಾರತದ ಆಕಾಂಕ್ಷೆಯಾಗಿದ್ದು, 75ನೇ ವರ್ಷದ ಸಂಭ್ರಮಾಚರಣೆಯಲ್ಲಿರುವ ಈ ವೇಳೆ ಜಾಗತಿಕ ಬಹುತ್ವ ವ್ಯವಸ್ಥೆಯ ಸುಧಾರಣೆಗೆ ಎಲ್ಲ ರಾಷ್ಟ್ರಗಳು ಪಣ ತೊಡಬೇಕು ಎಂದು ಕರೆ ನೀಡಿದರು.

ಆಧಾರ:ಕನ್ನಡ ಪ್ರಭ, ದಿನಾಂಕ:18.07.2020